**Akashvani: Bangalore**
**Regional Bulletin In Kannada**
**10.07.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**10.07.2026: 14.30hrs**
*********

**ಮುಖ್ಯಾಂಶಗಳು :**

1. ರಾಜ್ಯಾದ್ಯಂತ ಮತದಾರರ ಪಟ್ಟಿ ತೀವ್ರ ವಿಶೇಷ ಪರಿಷ್ಕರಣೆ ಪ್ರಗತಿಯಲ್ಲಿ; ಮುಖ್ಯ ಚುನಾವಣಾ ಅಧಿಕಾರಿ ಅನ್ಬುಕುಮಾರ್ ಸ್ಥಳ ಭೇಟಿ; ಪರಿಶೀಲನೆ
2. ಸಾರ್ವಜನಿಕರ ಹಿತರಕ್ಷಣೆಗಾಗಿ ಬೆಂಗಳೂರಿನಲ್ಲಿ ಪಾದಚಾರಿ ಮಾರ್ಗ ತೆರವು ಕಾರ್ಯಾಚರಣೆ - ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
3. ಜನರ ಬಳಿ ತೆರಳಿ, ಸಮಸ್ಯೆ ಆಲಿಸಿ ಪರಿಹಾರಕ್ಕೆ ಯತ್ನಿಸಲು ಹಿರಿಯ ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚನೆ
4. ಹಿರಿಯ ಸಾಹಿತಿ, ಕಾದಂಬರಿಗಾರ್ತಿ ಸಿ.ಎನ್. ಮುಕ್ತಾ ಮೈಸೂರಿನಲ್ಲಿ ನಿಧನ
5. ಕೆಜಿಎಫ್ ನಗರದಲ್ಲಿ ನಾಡಿದ್ದು ಅಲ್ಟ್ರಾ ಮ್ಯಾರಥಾನ್ ಆಯೋಜನೆ

********

ರಾಜ್ಯಾದ್ಯಂತ ಮತದಾರರ ಪಟ್ಟಿ ತೀವ್ರ ವಿಶೇಷ ಪರಿಷ್ಕರಣೆ - ಎಸ್ಐಆರ್ ಕಾರ್ಯ ಪ್ರಗತಿಯಲ್ಲಿದೆ. ಈ ಸಂಬಂಧ ರಾಜ್ಯ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ವಿಧಾನಸಭಾ ಕ್ಷೇತ್ರ ಯರ್ತಿಗಾನಹಳ್ಳಿ ಮತ್ತು ದೇವನಹಳ್ಳಿ ಮತಗಟ್ಟೆಗಳಿಗೆ ಭೇಟಿ ನೀಡಿ ಪರಿಷ್ಕರಣೆ ಪ್ರಕ್ರಿಯೆಯನ್ನು ಪರಿಶೀಲಿಸಿದರು. ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಎಸ್ಐಆರ್ ಪ್ರಕ್ರಿಯೆಯಲ್ಲಿ ಯಾವುದೇ ಲೋಪಗಳಾಗದಂತೆ, ಅರ್ಹ ಮತದಾರರ ಪಟ್ಟಿ ತಯಾರಿಸಬೇಕೆಂದು ನಿರ್ದೇಶಿಸಿದರು. ಬಳಿಕ ಜಿಲ್ಲಾಡಳಿತ ಭವನದಲ್ಲಿ ಜಿಲ್ಲೆಯ ಎಲ್ಲಾ ಮತದಾರರ ನೋಂದಣಾಧಿಕಾರಿ ಗಳೊಂದಿಗೆ ಸಭೆ ನಡೆಸಿ ಪರಿಷ್ಕರಣೆ ವೇಳೆ ಎದುರಾಗುತ್ತಿರುವ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದರು. ಉತ್ತರ ಕನ್ನಡ ಜಿಲ್ಲೆಯಲ್ಲಿ ಒಂದು ಲಕ್ಷದ ೪೦ ಸಾವಿರದ ೧೨೪ ಎನ್ಯುಮರೇಷನ್ ಫಾರ್ಮ್‌ಗಳನ್ನು ಗಣಕೀಕರಣ ಗೊಳಿಸಲಾಗಿದೆ ಎಂದು

ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಈವರೆಗಿನ ಮನೆ ಮನೆ ಭೇಟಿಯ ಸಂದರ್ಭದಲ್ಲಿ ಸ್ಥಳಾಂತರ, ಮರಣ ಹಾಗೂ ದ್ವಿಪ್ರತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು ಒಂದು ಸಾವಿರದ ೯೪೭ ಮತದಾರರನ್ನು ಗುರುತಿಸಲಾಗಿದೆ. ಇದರಲ್ಲಿ ೨೯೭ ಶಾಶ್ವತ ವಲಸೆ ಹಾಗೂ ೧೪೯೫ ಮರಣ ಹೊಂದಿದ ಪ್ರಕರಣಗಳು, ೧೪೩ ದ್ವಿಪ್ರತಿಗಳು ಸೇರಿವೆ ಎಂದು ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಸುಗಮವಾಗಿ ನಡೆಯುತ್ತಿದೆ. ಜಿಲ್ಲೆಯ ಸುಮಾರು ೧೩ ಲಕ್ಷ ೩೫ ಸಾವಿರ ಮತದಾರರ ಪೈಕಿ ಈಗಾಗಲೇ ೧೨ ಲಕ್ಷ ೯೯ ಸಾವಿರ ಮತದಾರರಿಗೆ ಗಣತಿ ನಮೂನೆ ನೀಡಲಾಗಿದೆ. ೩ ಲಕ್ಷ ೩೫ ಸಾವಿರ ಮತದಾರರ ಗಣಕೀಕರಣವನ್ನು ಮಾಡಲಾಗಿದೆ ಎಂದು ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

********

ಸಾರ್ವಜನಿಕರ ಹಿತರಕ್ಷಣೆಗಾಗಿ ಬೆಂಗಳೂರಿನಲ್ಲಿ ಪಾದಚಾರಿ ಮಾರ್ಗ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಅವರು ಬೆಂಗಳೂರಿನಲ್ಲಿಂದು ವಿವಿಧ ಸ್ಥಳಗಳಿಗೆ ಭೇಟಿ ನೀಡಿ, ತೆರವು ಕಾರ್ಯಾಚರಣೆಯ ಪ್ರಗತಿ ಪರಿಶೀಲನೆ ನಡೆಸಿದರು. ಪಾದಚಾರಿ ಮಾರ್ಗಗಳು ಸುರಕ್ಷಿತವಾಗಿದ್ದರೆ, ಮಕ್ಕಳು, ಹಿರಿಯ ನಾಯಕರು, ಮಹಿಳೆಯರು ಹಾಗೂ ವಿಶೇಷಚೇತನರು ಆತ್ಮವಿಶ್ವಾಸದಿಂದ ಸಂಚರಿಸಬಹುದು; ನಗರದ ಅಭಿವೃದ್ಧಿ ಎಂದರೆ ಕೇವಲ ರಸ್ತೆ ಅಗಲೀಕರಣವಲ್ಲ, ಅಡೆತಡೆ ಇಲ್ಲದ ಪಾದಚಾರಿ ಮಾರ್ಗಗಳನ್ನು ಒದಗಿಸುವುದು ಅಷ್ಟೇ ಮುಖ್ಯ ಎಂದು ಸಾಮಾಜಿಕ ಮಾಧ್ಯಮದಲ್ಲಿ ಅವರು ತಿಳಿಸಿದ್ದಾರೆ.

********

ರಾಜ್ಯದಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳನ್ನು ಮತ್ತಷ್ಟು ಸಕ್ರಿಯವಾಗಿಸಲು ಯೋಜನೆಗಳನ್ನು ರೂಪಿಸಲಾಗುತ್ತಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿರುವ ಅನಿಬೆಸೆಂಟ್ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರವನ್ನು ಅಂತರ ರಾಷ್ಟ್ರೀಯ ಮಟ್ಟದ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಪುನರ್‌ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್‌ನ

ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ತಿಳಿಸಿದ್ದಾರೆ. ಅನಿಬೆಸೆಂಟ್ ಪಾರ್ಕ್ ನಲ್ಲಿರುವ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿ ಕೇಂದ್ರದಲ್ಲಿ ಕಟ್ಟಡಗಳ ಉನ್ನತೀಕರಣಕ್ಕೆ ಸ್ಥಳೀಯ ಶಾಸಕ ಧೀರಜ್ ಮುನಿರಾಜು ಅವರೊಂದಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಮಕ್ಕಳು ಪರಿಸರದ ಬಗ್ಗೆ ತಿಳಿದುಕೊಳ್ಳಬೇಕು, ಈ ಹಿನ್ನೆಲೆಯಲ್ಲಿ ಕರಾವಳಿ ಪ್ರದೇಶದ ಸಾಹಸ ಚಟುವಟಿಕೆಗಳ ಮಾದರಿಯ ತರಬೇತಿಯನ್ನು ಕೂಡ ಇಲ್ಲಿ ಪರಿಚಯಿಸುವ ಉದ್ದೇಶವಿದೆ ಎಂದು ಸಿಂಧ್ಯಾ ಹೇಳಿದರು.

********

ಹಾವೇರಿ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ನಾಳೆ ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಆಗಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿರಾದಾರ ದೇವಿಂದ್ರಪ್ಪಾ ಎನ್. ಕೋರಿದ್ದಾರೆ. ವ್ಯಾಜ್ಯಪೂರ್ವ ಹಾಗೂ ನ್ಯಾಯಾಲಯದಲ್ಲಿ ಬಾಕಿ ಇರುವ ರಾಜಿ ಆಗಬಹುದಾದ ಪ್ರಕರಣಗಳನ್ನು ಲೋಕ ಅದಾಲತ್‌ನ ಮೂಲಕ ತಕ್ಷಣ ಪರಿಹಾರ ಪಡೆದುಕೊಳ್ಳಲು ಒಂದು ಸುವರ್ಣಾವಕಾಶವಾಗಿರುತ್ತದೆ ಎಂದು ಅವರು ಆಕಾಶವಾಣಿಗೆ ನೀಡಿದ ಸಂದರ್ಶನದಲ್ಲಿ ತಿಳಿಸಿದ್ದಾರೆ.

*****ಧ್ವನಿ****ಬಿರಾದಾರ ದೇವಿಂದ್ರಪ್ಪಾ

ರಾಷ್ಟ್ರೀಯ ಲೋಕ ಅದಾಲತ್ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆ ನಡೆಸಿ ಮಾಹಿತಿ ನೀಡಲಾಗಿದೆ. ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಂಡಾಗ ಸಮಯ, ಹಣದ ಉಳಿತಾಯವಾಗುತ್ತದೆ ಹಾಗೂ ಸಂಬಂಧಗಳು ಕೆಡುವುದಿಲ್ಲ, ಜೊತೆಗೆ ನೆಮ್ಮದಿ ಕಾಣಬಹುದು ಎಂದು ಅವರು ವಿವರಿಸಿದ್ದಾರೆ.

********

ಹಿರಿಯ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಜನರ ಬಳಿ ತೆರಳಿ, ಅವರ ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲೇ ಪರಿಹಾರ ಸಿಗುವಂತೆ ನೋಡಿಕೊಳ್ಳಬೇಕೆಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಸೂಚಿಸಿದ್ದಾರೆ. ಜನರು ಸಣ್ಣಪುಟ್ಟ ಸಮಸ್ಯೆಗಳ ಪರಿಹಾರಕ್ಕಾಗಿ ದೂರದ

ಊರುಗಳಿಂದ ಮುಖ್ಯಮಂತ್ರಿ ಹಾಗೂ ಸಚಿವರುಗಳನ್ನು ಭೇಟಿಯಾಗಲು ಬೆಂಗಳೂರಿಗೆ ಬರುತ್ತಾರೆ. ಇನ್ನು ಮುಂದೆ ಹಾಗೆ ಆಗಬಾರದು; ಸ್ಥಳೀಯ ಸಮಸ್ಯೆಗಳಿಗೆ ತಕ್ಷಣವೇ ಅಥವಾ ಕಾಲಮಿತಿಯೊಳಗೆ ಪರಿಹಾರ ಸಿಗಲೇಬೇಕು. ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಣಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠರು ಹಾಗೂ ಇತರೆ ಅಧಿಕಾರಿಗಳು ಅಭಿವೃದ್ಧಿಯ ಜೊತೆಗೆ ಕಾನೂನು ಸುವ್ಯವಸ್ಥೆ ಕಾಪಾಡುವುದಕ್ಕೆ ಮುಂದಾಗಬೇಕು ಎಂದು ಉಪಮುಖ್ಯಮಂತ್ರಿ ಆದೇಶಿಸಿದ್ದಾರೆ.

********

ಹಿರಿಯ ಸಾಹಿತಿ, ಕಾದಂಬರಿಗಾರ್ತಿ ಸಿ.ಎನ್. ಮುಕ್ತಾ ಮೈಸೂರಿನಲ್ಲಿಂದು ನಿಧನ ಹೊಂದಿದರು. ಅವರಿಗೆ ೭೫ ವರ್ಷ ವಯಸ್ಸಾಗಿತ್ತು. ಸಾಹಿತ್ಯದ ಎಲ್ಲ ಪ್ರಕಾರಗಳ ಬರವಣಿಗೆಯಲ್ಲಿ ತೊಡಗಿಸಿಕೊಂಡಿದ್ದ ಅವರು, ೭೫ಕ್ಕೂ ಹೆಚ್ಚು ಕಾದಂಬರಿ, ಧಾರಾವಾಹಿಗಳನ್ನು ಬರೆದಿದ್ದಾರೆ. ಅವರ ಕೆಲವು ಸಾಹಿತ್ಯ ಕೃತಿಗಳು ಟಿವಿ ಧಾರಾವಾಹಿಗಳಾಗಿ ಹಾಗೂ ಚಲನಚಿತ್ರಗಳಾಗಿ ಮೂಡಿಬಂದಿವೆ. ಅವರು ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ವಿವಿಧ ಗೌರವಗಳಿಗೆ ಭಾಜನರಾಗಿದ್ದರು.

********

ಕೇಂದ್ರ ಸರ್ಕಾರದಿಂದ 'ವಿಬಿ-ಜಿ ರಾಮ್ ಜಿ' ಯೋಜನೆ ಕುರಿತು ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ೪೦ ಗ್ರಾಮ ಪಂಚಾಯಿತಿ ವ್ಯಾಪ್ತಿಯ ೧೦೮ ಗ್ರಾಮಗಳಲ್ಲಿ ಜನ ಜಾಗೃತಿ ಮೂಡಿಸಲಾಗುತ್ತಿದೆ. ಬಿಲ್ಲಹಳ್ಳಿ ಗ್ರಾಮ ಪಂಚಾಯಿತಿ ಆವರಣದಲ್ಲಿಂದು ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ರಾಣೆಬೆನ್ನೂರ ಶಾಸಕ ಪ್ರಕಾಶ ಕೋಳಿವಾಡ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಯೋಜನೆಯಡಿ ಒಂದು ಕುಟುಂಬಕ್ಕೆ ಕನಿಷ್ಠ ೧೨೫ ದಿನಗಳ ಕೂಲಿ ಕೆಲಸಗಳನ್ನು ನಿಗದಿಗೊಳಿಸಲಾಗಿದೆ. ಯೋಜನೆ ಪಾರದರ್ಶಕ ಅನುಷ್ಠಾನ ಉದ್ದೇಶದಿಂದ ತಾಲೂಕಿನಲ್ಲಿ ಈಗಾಗಲೇ ಸಕ್ರೀಯ ಉದ್ಯೋಗ ಚೀಟಿ ಹೊಂದಿದ ೩೨ ಸಾವಿರ ೭೦೧ ಫಲಾನುಭವಿಗಳ ಇ-ಕೆವೈಸಿ ಅನ್ನು ಶೇಕಡ ೯೮ರಷ್ಟು ಮಾಡಲಾಗಿದೆ ಎಂದರು.

********

ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆ ಮುಂದುವರೆಯುತ್ತಿರುವುದರಿಂದ ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಜಲಾಶಯಕ್ಕೆ ಒಳ ಹರಿವು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ನೀರು ಸಂಗ್ರಹಣೆಯಲ್ಲಿ ಏರಿಕೆಯಾಗುತ್ತಿದೆ. ಇಂದು ಒಳ ಹರಿವಿನ ಪ್ರಮಾಣ ೧೨,೩೧೨ ಇದ್ದು, ಗರಿಷ್ಠ ೧೨೪.೮೦ ಅಡಿ ವಿಸ್ತೀರ್ಣ ಹೊಂದಿರುವ ಜಲಾಶಯದಲ್ಲಿ ಪ್ರಸ್ತುತ ೮೭.೫೦ ಅಡಿ ನೀರಿದೆ.

ಕೆಆರ್‌ಎಸ್ ಜಲಾಶಯದಲ್ಲಿ ನೀರಿನ ಸಂಗ್ರಹಣೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರೈತರ ಹಿತಾಸಕ್ತಿ ಗಮನಿಸಿ, ಮಾನವೀಯತೆ ಆಧಾರದ ಮೇಲೆ ಕೃಷಿಗೆ ನೀರು ಬಿಡಬೇಕು ಎಂದು ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಒತ್ತಾಯಿಸಿದ್ದಾರೆ. ಮಂಡ್ಯ ತಾಲೂಕಿನ ಸಂತೆ ಕಸಲಗೆರೆ ಗ್ರಾಮಕ್ಕೆ ಭೇಟಿ ನೀಡಿ, ಕಬ್ಬು, ತೆಂಗು ಬೆಳೆಯನ್ನು ವೀಕ್ಷಿಸಿದ ಅವರು, ಕೆ.ಆರ್.ಎಸ್. ಅಣೆಯಟ್ಟೆಯಲ್ಲಿ ೬೦ ರಿಂದ ೭೪ ಅಡಿ ನೀರಿದ್ದರೆ ಕುಡಿಯಲು ಮಾತ್ರ ಬಳಕೆ ಮಾಡಬೇಕು. ೭೪ ಅಡಿಯ ಮೇಲೆ ಎಷ್ಟೇ ನೀರಿದ್ದರೂ ಕೃಷಿ ಬೆಳೆಗೆ ನೀಡಬೇಕೆಂಬ ನಿಯಮ ಇದೆ. ಪ್ರಸ್ತುತ ಅಣೆಕಟ್ಟೆಯಲ್ಲಿ ೮೭ ಅಡಿ ನೀರು ಇರುವ ಕಾರಣ ಕೃಷಿಗೆ ನೀರು ಬಿಡಬೇಕೆಂದು ಆಗ್ರಹಿಸಿದ್ದಾರೆ.

********

ಸೌಹಾರ್ದ ಕಾಯ್ದೆಯ ವಿರುದ್ಧವಾಗಿ ಕಾರ್ಯನಿರ್ವಹಿಸಿದರೆ ಹಾಗೂ ಹಣಕಾಸಿನ ದುರುಪಯೋಗ ಕಂಡುಬಂದಲ್ಲಿ ಕಾನೂನಿನಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಂಯುಕ್ತ ಸಹಕಾರಿ ರಾಜ್ಯ ಅಧ್ಯಕ್ಷ ಜಿ. ನಂಜನಗೌಡ ತಿಳಿಸಿದ್ದಾರೆ. ದಾವಣಗೆರೆಯಲ್ಲಿ ಸೌಹಾರ್ದ ಸಹಕಾರಿಗಳ ಅಧ್ಯಕ್ಷರು, ನಿರ್ದೇಶಕರು ಮತ್ತು ಸಿಬ್ಬಂದಿಗಳಿಗೆ ಹಮ್ಮಿಕೊಂಡಿದ್ದ ಸಂಪರ್ಕ ಸಭೆ ಉದ್ಘಾಟಿಸಿ ಅವರು ಮಾತನಾಡಿದರು. ಸೌಹಾರ್ದ ಸಹಕಾರಿ ಚಳವಳಿ ರಾಜ್ಯದಲ್ಲಿ ಯಶಸ್ವಿಯಾಗಿ ದೇಶಕ್ಕೇ ಮಾದರಿಯಾಗಿದೆ. ಸೌಹಾರ್ದ ಸಹಕಾರಿಗಳ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಬಹಳ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ಕಾಯ್ದೆ, ಕಾನೂನುಗಳನ್ನು ಸರಿಯಾಗಿ ಅರಿತುಕೊಂಡು ಸಂಸ್ಥೆಯ ಜವಾಬ್ದಾರಿಗಳನ್ನು ನಿಭಾಯಿಸಬೇಕು ಎಂದು ಅವರು ಕರೆ ನೀಡಿದರು. ಸಭೆಯಲ್ಲಿ ಜಿಲ್ಲೆಯ ವಿವಿಧ ಸೌಹಾರ್ದ ಸಹಕಾರ ಸಂಘಗಳ ೧೫೦ಕ್ಕೂ ಅಧಿಕ ಸದಸ್ಯರು, ಸಿಬ್ಬಂದಿ ಭಾಗವಹಿಸಿದ್ದರು.

********

ಕೆಜಿಎಫ್ ನಗರದಲ್ಲಿ ಜಿಲ್ಲಾಡಳಿತ ಮತ್ತು ಬೆಸ್ಟ್ ಸಂಸ್ಥೆಯ ಜಂಟಿ ಆಶ್ರಯದಲ್ಲಿ ನಾಡಿದ್ದು 'ಕೆಜಿಎಫ್ ಅಲ್ಟ್ರಾ ಮ್ಯಾರಥಾನ್' ಹಮ್ಮಿಕೊಳ್ಳಲಾಗಿದೆ. ಈ ಕ್ರೀಡಾಕೂಟದಲ್ಲಿ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಖ್ಯಾತ ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ ಎಂದು ಮ್ಯಾರಾಥಾನ್ ಸಂಘಟಕ ಕಮಲನಾಥನ್ ತಿಳಿಸಿದ್ದಾರೆ. ಸುಮಾರು ಒಂದು ಸಾವಿರದ ೫೦೦ಕ್ಕೂ ಹೆಚ್ಚು ಮಂದಿ ಈ ಓಟದಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಸ್ಥಳೀಯ ಯುವಕರು ಮುಂಬರುವ ದಿನಗಳಲ್ಲಿ ಇಂತಹ ಕ್ರೀಡೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು ಇದು ಪ್ರೇರಣೆಯಾಗಲಿದೆ ಎಂದು ಅವರು ಹೇಳಿದ್ದಾರೆ.

****END****